**CC 187/2014**
**PW.1**

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

## ಸಿ ಸಿ ನಂ :187/2014

**ಪಿ ಡಬ್ಲ್ಯೂ - 1**

**ಸಿ ಡಬ್ಲ್ಯೂ - 1**

**ದಿಃ 23.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಶ್ರೀನಿವಾಸ್**

**ತಂದೆಯ ಹೆಸರು ಃ ವೆಂಕಟಸ್ವಾಮಯ್ಯ**

**ವಯಸ್ಸು ಃ 49 ವರ್ಷ**

**ಉದ್ಯೋಗ ಃ ವ್ಯವಸಾಯ**

**ವಿಳಾಸ ಃ ಶಿರಸ್ತೇದಾರನ ಪಾಳ್ಯ, ದೊಡ್ಡಬಳ್ಳಾಪುರ ತಾಲ್ಲೂಕು**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತರು ನನ್ನ ಸಂಬಂಧಿಕರು. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ದೂರನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಆರೋಪಿತರು ಮತ್ತು ನಮ್ಮ ನಡುವೆ ಕೌಟುಂಬಿಕ ವಿಚಾರವಾಗಿ ಮಾತಿನ ಚಕಮಕಿಯಾಗಿದ್ದು ಆಗ ನಾನು ಸಿಟ್ಟಾಗಿ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ನಿಪಿ-1 ಮತ್ತು 2 ಕ್ಕೆ ನನ್ನ ಸಹಿಯನ್ನು ಪಡೆದಿರುತ್ತಾರೆ. ನಿಪಿ-1 ಮತ್ತು 2 ರಲ್ಲಿನ ವಿಚಾರ ಗೊತ್ತಿಲ್ಲ. ನನಗೆ ಆರೋಪಿತರು ಅವಾಚ್ಯ ಶಬ್ಧಗಳಿಂದ ಬೈದಿರುವುದಿಲ್ಲ ಹಾಗೂ ಯಾವುದೇ ವಸ್ತುವಿನಿಂದ ಹಾಗೂ ಕೈಗಳಿಂದ ಹೊಡೆದು ನೋವುಂಟು ಮಾಡಿಲ್ಲ. ನಾನು ಆಸ್ಪತ್ರೆಗೆ ಹೋಗಿ ಚಿಕಿತ್ಸೆಯನ್ನು ಪಡೆದಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದಃ**

ದಿಃ 10.01.2014 ರಂದು ನಾನು ರಾತ್ರಿ 7-30 ಗಂಟೆ ಸಮಯದಲ್ಲಿ ನಮ್ಮ ಮನೆಯ ಮುಂದೆ ನನ್ನ ಮಗಳು ಆಟವಾಡುತ್ತಿದ್ದಾಗ 1 ನೇ ಆರೋಪಿಯು ನನ್ನ ಮಗಳ ಕಾಲು

ತುಳಿದಿದ್ದರಿಂದ ಆಕೆ ಅಳುತ್ತಿದ್ದಳು, ಆಗ ನಾನು ಏಕೆ ಕಾಲು ತುಳಿದೆ ಎಂದು ಕೇಳಿದಾಗ 1 ನೇ ಆರೋಪಿಯು ಅವಾಚ್ಯಶಬ್ಧಗಳಿಂದ ಬೈದು, ನಮ್ಮ ಮನೆಯ ಮುಂದೆ ಬಿದ್ದಿದ್ದ ಸೌದೆ ಪಾಳಿನಿಂದ ನನ್ನ ತಲೆಗೆ ಹೊಡೆದು ರಕ್ತಗಾಯಪಡಿಸಿದ ಎಂದರೆ ಸರಿಯಲ್ಲ. ಆಗ ಅಲ್ಲಿಗೆ ಬಂದ 2 ನೇ ಆರೋಪಿಯೂ ಸಹ ನನಗೆ ಕೈಗಳಿಂದ ಹೊಡೆದು ಅವಾಚ್ಯಶಬ್ಧಗಳಿಂದ ಬೈದಿದ್ದರು ಎಂದರೆ ಸರಿಯಲ್ಲ. ಈ ಕುರಿತು ನಾನು ದಿಃ 10.01.2014 ರಂದು ನಿಪಿ-1 ರಂತೆ ದೂರನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಂತರ ದಿಃ 11.01.2014 ರಂದು ನಾನು ತೋರಿಸಿದ ಘಟನಾ ಸ್ಥಳಕ್ಕೆ ಪೋಲೀಸರು ಬಂದು ಚಾಸಾ-2 ಮತ್ತು 3 ರವರ ಸಮಕ್ಷಮ ಬೆಳಿಗ್ಗೆ 7-00 ರಿಂದ 7-45 ಗಂಟೆ ಸಮಯದವರೆಗೂ ನಿಪಿ-2 ರಂತೆ ಪಂಚನಾಮೆಯನ್ನು ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ಮತ್ತು 2 ರಲ್ಲಿನ ವಿಚಾರ ಗೊತ್ತಿದ್ದರು ನಾನು ಸುಳ್ಳು ನುಡಿಯುತ್ತಿದ್ದೇನೆಂದರೆ ಸಾಕ್ಷಿಯು ನಾವು ಈಗ ರಾಜಿಯಾಗಿದ್ದೇವೆಂದು ನುಡಿಯುತ್ತಾರೆ. ರಾಜಿಯಾದ ಕಾರಣ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ನುಡಿಯುತ್ತಿದ್ದೇನೆಂದರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**